ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ರವರ ನ್ಯಾಯಾಲಯ, ಮಳವಳ್ಳಿ.

ಸಿಸಿ ನಂಃ **72/2024**

| | | |
|---|---|---|
| ಹೆಸರು | ಮಹದೇವ | ಸಿ.ಡಬ್ಲ್ಯೂ - **14** |
| ತಂದೆಯ ಹೆಸರು | ಸುಬ್ಬೇಗೌಡ | ಪಿ.ಡಬ್ಲ್ಯೂ - **04** |
| ವಯಸ್ಸು | 63 ವರ್ಷ | |
| ಉದ್ಯೋಗ | ವ್ಯವಸಾಯ | |
| ವಾಸ ಸ್ಥಳ | ನಾಗೇಗೌಡನ ದೊಡ್ಡಿ | |

ಸಾಕ್ಷಿಗೆ ದಿನಾಂಕಃ 04.08.2026 ರಂದು ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ಎ ಪಿ ಪಿ ರರಿಂದ ಃ

ಈಗ ನೋಡುತ್ತಿರುವ ಂದಾಖಲೆಗೆ ನಾನು ಎಲ್ಲಿ ಯಾವ ಉದ್ದೇಶಕ್ಕೆ ಸಹಿ ಮಾಡಿರುತ್ತೇನೆ ಎಂದು ಗೊತ್ತಿರುವುದಿಲ್ಲ. ಸದರಿ ದಾಖಲೆಯು ಅಮಾನತ್ತು ಮಹಜರ್ ಆಗಿದ್ದು ಅದನ್ನು ನಿಪಿ **13** ಎಂದು, ಸಾಕ್ಷಿಯ ಸಹಿಯನ್ನು ನಿಪಿ **13** ಎ ಎಂದು ಗುರುತಿಸಲಾಯಿತು. ಸದರಿ ದಾಖಲೆಯಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿರುವುದಿಲ್ಲ. ನನ್ನ ಸಮಕ್ಷಮ ಯಾವುದೇ ವಾಹನವನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ. ಈಗ ನೋಡುತ್ತಿರುವ ನಿಪಿ **4** ಮತ್ತು **5** ಫೋಟೋ ಗಳಲ್ಲಿ ನನ್ನ ಭಾವ ಚಿತ್ರ ವಿದ್ದು ಅವುಗಳನ್ನು ಯಾವ ಉದ್ದೇಶಕ್ಕೆ ತೆಗೆಸಲಾಗಿದೆ ಎಂದು ಗೊತ್ತಿರುವುದಿಲ್ಲ.

ಎಪಿಪಿ ಯವರ ವಿನಂತಿ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿಸಲಾಯಿತು.

ಪಾಟೀ ಸವಾಲುಃ ಎ ಪಿ ಪಿ ರವರಿಂದ ಃ

ದಿನಾಂಕಃ 15.05.2024 ರಂದು ಪೊಲೀಸ್ ಠಾಣಾ ಆವರಣದಲ್ಲಿ ಅಪಘಾತಕ್ಕೆ ಸಂಬಂಧವಾಗಿ ನನ್ನ ಮತ್ತು ಚಾಸಾ 15 ರವರ ಸಮಕ್ಷಮ ನಿಪಿ 13 ರಂತೆ ಮಧ್ಯಾಹ್ನ 01.15 ರಿಂದ 01.45 ರ ಸಮಯದಲ್ಲಿ ಅಮಾನತ್ತು ಮಹಜರ್ ಮಾಡಿ ಕೆಎ-42-ಇ ಎಫ್-7420 ನಂಬರಿನ ಬೈಕ್ ನ್ನು ಅಮಾನತ್ತು ಪಡಿಸಿಕೊಂಡು ನಿಪಿ 4 ಮತ್ತು 5 ರಂತೆ ಫೋಟೋಗಳನ್ನು ತೆಗೆಸಿರುತ್ತಾರೆ ಎಂದರೆ ಸರಿಯಲ್ಲ. ಎಲ್ಲಾ ಗೊತ್ತಿದ್ದರು ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು.

ಓ ಹೇ ಕೇ ಸ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಮಳವಳ್ಳಿ.